**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ. ಸಿ. ನಂ. 25/2025**

**ಚಾ.ಸಾಃ 17, ಫ್ರಾ.ಸಾಃ 6**

| | |
|---|---|
| ಸಾಕ್ಷಿದಾರನ ಹೆಸರು | ಶ್ರೀ ಕೆ. ಎಂ. ಯೋಗೀಶ್ |
| ತಂದೆಯ ಹೆಸರು | ಮಹಾಲಿಂಗಪ್ಪ |
| ವಯಸ್ಸು | 54 ವರ್ಷಗಳು |
| ಉದ್ಯೋಗ | ಆರಕ್ಷಕ ನಿರೀಕ್ಷಕರು, ಕುಮಟಾ ಪೋಲೀಸ್ ಠಾಣೆ |
| ವಾಸ್ತವ್ಯ | ಕುಮಟಾ |

**ಸಾಕ್ಷಿಯನ್ನು ದಿನಾಂಕಃ 16-12-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ದಿನಾಂಕ 16-09-2024 ರಿಂದ 15-07-2025 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಪ್ರಭಾರ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 28-12-2024 ರಂದು ಕೇಸಿನ ಕಡತವನ್ನು ಚಾಸಾ-14 ರವರಿಂದ ಪಡೆದುಕೊಂಡಿರುತ್ತೇನೆ.

ಅದೇ ದಿನ ಮೃತನ ಶವ ಪರೀಕ್ಷಾ ವರದಿ ತಯಾರಿಸಿಕೊಂಡು ಬರುವಂತೆ ಚಾಸಾ-16 ರವರಿಗೆ ಜ್ಞಾಪನ ನೀಡಿರುತ್ತೇನೆ. ಅದರಂತೆ ಚಾಸಾ-16 ರವರು ಸರಕಾರಿ ಆಸ್ಪತ್ರೆಗೆ ಭೇಟಿ ನೀಡಿ ಪಂಚರ ಸಮಕ್ಷಮ ಶವತನಿಖಾ ವರದಿಯನ್ನು ತಯಾರಿಸಿ ಚಾಸಾ-6 ರವರ ಹೇಳಿಕೆಯನ್ನು ಪಡೆದು ಹಾಜರುಪಡಿಸಿರುತ್ತಾರೆ. ಸದರಿ ಶವ ತನಿಖಾ ವರದಿಯನ್ನು ಈಗ ನೋಡುತ್ತಿದ್ದು ನಿಪಿ-18 ಎಂದು ಗುರುತಿಸಲಾಯಿತು. ನಂತರ ಚಾಸಾ-16 ರವರು ವೈದ್ಯಕೀಯ ಪರೀಕ್ಷೆಯ ನಂತರ ಮೃತನ ವಾರಸುದಾರರಿಗೆ ಹಸ್ತಾಂತರಿಸಿ ಈ ಬಗ್ಗೆ ರಸೀದಿಯನ್ನು ತಂದು ಹಾಜರುಪಡಿಸಿದ್ದು ಅದನ್ನು ಪಡೆದು ಕಡತಕ್ಕೆ ಅಳವಡಿಸಿರುತ್ತೇನೆ.

ಅದೇ ದಿನ ಶವ ಪಂಚನಾಮೆಯ ಕಾಲಕ್ಕೆ ಫೋಟೋಗಳನ್ನು ತೆಗೆದು ಅದನ್ನು ಸಿಡಿಯಲ್ಲಿ ಹಾಕಿ ಹಾಜರುಪಡಿಸಿದ ಬಗ್ಗೆ ಚಾಸಾ-16 ರವರು ವರದಿ ನೀಡಿರುತ್ತಾರೆ.

ದಿನಾಂಕ 01-01-2025 ರಂದು ಚಾಸಾ-15 ರವರಿಗೆ ಘಟನಾ ಸ್ಥಳದ ಪಂಚನಾಮೆ ಮತ್ತು ವಾಹನಗಳನ್ನು ಅಮಾನತ್ತುಪಡಿಸಿಕೊಂಡು ಬರಲು ಜ್ಞಾಪನ ನೀಡಿರುತ್ತೇನೆ. ಅದರಂತೆ ಚಾಸಾ-15 ವರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಸ್ಥಳ ಪಂಚನಾಮೆ ಮತ್ತು ಕಚ್ಚಾ ನಕಾಶೆಯನ್ನು ತಯಾರಿಸಿ, ಫೋಟೋ ತೆಗೆಸಿ ಅವುಗಳನ್ನು ತಂದು ನನ್ನ ಮುಂದೆ ಹಾಜರುಪಡಿಸಿದ್ದು ಅವುಗಳನ್ನು ಪಡೆದು ಕಡತಕ್ಕೆ ಅಳವಡಿಸಿರುತ್ತೇನೆ. ಆ ಕಾಲಕ್ಕೆ ಚಾಸಾ-7 ರವರ ಹೇಳಿಕೆಯನ್ನು ಪಡೆದು ತಂದು ನನ್ನ ಮುಂದೆ ಹಾಜರುಪಡಿಸಿರುತ್ತಾರೆ. ಶವ ಪಂಚನಾಮೆಯ ಕಾಲಕ್ಕೆ ತೆಗೆದಿದ್ದ ಫೋಟೋಗಳ ಡಿವಿಡಿಯನ್ನು ಹಾಜರುಪಡಿಸಿರುತ್ತಾರೆ. ಸದರಿ ಡಿವಿಡಿಯನ್ನು ನೋಡುತ್ತಿದ್ದು ನಿಪಿ-19 ಎಂದು ಗುರುತಿಸಲಾಯಿತು.

ದಿನಾಂಕ 17-01-2025 ರಂದು ಕೇಸಿನ ಕಡತವನ್ನು ಚಾಸಾ-18 ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ವಿ. ಆರ್. ನಾಯ್ಕರು ಪಾಟೀಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**